**Akashvani : Bangalore**
**National Bulletin In Kannada**
**22.02.2025 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮಧ್ಯಪ್ರದೇಶ, ಬಿಹಾರ ಮತ್ತು ಅಸ್ಸಾಂ ಗೆ ಮೂರು ದಿನ ಪ್ರಧಾನಮಂತ್ರಿ ನರೇಂದ್ರ ಮೋದಿ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ

೨. ಸಹಕಾರ ಶಿಕ್ಷಣ ಬಲವರ್ಧನೆಗೆ ಮಸೂದೆ - ಕೇಂದ್ರ ಸಚಿವ ಅಮಿತ್ ಶಾ ಘೋಷಣೆ

೩. ಆಕಾಶವಾಣಿಯ ಮನ್ ಕಿ ಬಾತ್ ನಾಳೆ ಪ್ರಸಾರ, ೧೧೯ನೇ ಆವೃತ್ತಿಯಲ್ಲಿ ಅನಿಸಿಕೆ ಹಂಚಿಕೊಳ್ಳಲಿರುವ ಪ್ರಧಾನಿ

೪. ಬೆಂಗಳೂರಿನಲ್ಲಿ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯ : ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಯುಪಿ ವಾರಿಯರ್ಸ್ ನಡುವಣ ಪಂದ್ಯ ಪ್ರಗತಿಯಲ್ಲಿ

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆಯಿಂದ ಮಧ್ಯಪ್ರದೇಶ, ಬಿಹಾರ ಮತ್ತು ಅಸ್ಸಾಂ ರಾಜ್ಯಗಳಿಗೆ ಮೂರು ದಿನಗಳ ಭೇಟಿ ನೀಡಲಿದ್ದಾರೆ. ಮಧ್ಯಪ್ರದೇಶದ ಛತ್ತರ್‌ಪುರ ಜಿಲ್ಲೆಯಲ್ಲಿ ಬಗೇಶ್ವರ ಧಾಮ್ ವೈದ್ಯಕೀಯ ಮತ್ತು ವಿಜ್ಞಾನ ಸಂಶೋಧನಾ ಸಂಸ್ಥೆಗೆ ನಾಳೆ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಬಳಿಕ, ಭೋಪಾಲ್‌ನಲ್ಲಿ ಎರಡು ದಿನಗಳ ಜಾಗತಿಕ ಹೂಡಿಕೆದಾರರ ಶೃಂಗಸಭೆ ೨೦೨೫ ಅನ್ನು ಉದ್ಘಾಟಿಸಲಿದ್ದಾರೆ. ಸೋಮವಾರದಂದು ಪ್ರಧಾನಿ ಬಿಹಾರದ ಭಗಲ್ಪುರದಲ್ಲಿ ಪಿಎಂ ಕಿಸಾನ್ ಯೋಜನೆಯ ೧೯ ನೇ ಕಂತನ್ನು ಬಿಡುಗಡೆ ಮಾಡಲಿದ್ದಾರೆ ಹಾಗೂ ಬಿಹಾರದಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳನ್ನು ಉದ್ಘಾಟಿಸಿ ಲೋಕಾರ್ಪಣೆ ಮಾಡಲಿದ್ದಾರೆ. ನಂತರ ಅವರು ಗುವಾಹಟಿಗೆ ಪ್ರಯಾಣ ಬೆಳೆಸಲಿದ್ದು, ಮೆಗಾ ಜುಮೊಯಿರ್ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಇದು ಚಹಾ ಉದ್ಯಮದ ೨೦೦ ವರ್ಷಗಳ ಪಯಣ ಮತ್ತು ಅಸ್ಸಾಂನಲ್ಲಿ ೨೦೦ ವರ್ಷಗಳ ಕೈಗಾರಿಕೀಕರಣದ ಸಂಕೇತವಾಗಿದೆ. ಗುವಾಹಟಿಯಲ್ಲಿ ಅಡ್ವಾಂಟೇಜ್ ಅಸ್ಸಾಂ ೨.೦ ಹೂಡಿಕೆ ಮತ್ತು ಮೂಲಸೌಕರ್ಯ ಶೃಂಗಸಭೆ ೨೦೨೫ ಅನ್ನು ಮಂಗಳವಾರದಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಉದ್ಘಾಟಿಸಲಿದ್ದಾರೆ.

<><*<><>*><>

ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೧೯ನೇ ಕಂತಿನ ಹಣವನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಬಿಹಾರದ ಬಘಲ್‌ಪುರದಿಂದ ಬಿಡುಗಡೆ ಮಾಡಲಿದ್ದಾರೆ. ಈ ಯೋಜನೆಯಡಿ ಜಮೀನು ಹೊಂದಿರುವ ರೈತರಿಗೆ ವಾರ್ಷಿಕವಾಗಿ ಆರು ಸಾವಿರ ರೂಪಾಯಿ ನೀಡಲಾಗುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲು ಈ ಹಣ ಬಿಡುಗಡೆ ದಿನವನ್ನು ಕಿಸಾನ್ ಸಮ್ಮಾನ್ ಸಮಾರೋಹ್ ದಿನ ಎಂದು ಆಚರಿಸಲಾಗುವುದು. ದೇಶಾದ್ಯಂತ ೭೩೧ ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಸುಮಾರು ಎರಡೂವರೆ ಕೋಟಿ ಜನರು ಈ ಕಾರ್ಯಕ್ರಮದಲ್ಲಿ ಆನ್‌ಲೈನ್ ಮತ್ತು ಆಫ್‌ಲೈನ್ ಮೂಲಕ ಪಾಲ್ಗೊಳ್ಳಲಿದ್ದಾರೆ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಹೇಳಿದ್ದಾರೆ. ನೇರ ನಗದು ವರ್ಗಾವಣೆ ಮೂಲಕ ೨೨ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೊತ್ತದ ನೆರವು ದೇಶಾದ್ಯಂತದ ೯.೮ ಕೋಟಿಗೂ ಅಧಿಕ ರೈತರಿಗೆ ಸಿಗಲಿದೆ. ಈವರೆಗೆ ೧೧ ಕೋಟಿಗೂ ಅಧಿಕ ರೈತ ಕುಟುಂಬಗಳಿಗೆ ೩.೪೬ ಲಕ್ಷ ಕೋಟಿ ರೂಪಾಯಿಗಳನ್ನು ನೀಡಲಾಗಿದೆ. ರೈತರ ಕಲ್ಯಾಣವೇ ಮೋದಿ ಸರ್ಕಾರದ ಆದ್ಯತೆ ಎಂದು ಸಚಿವರು ತಿಳಿಸಿದ್ದಾರೆ.

<><*<><>*><>

ಸಹಕಾರ ಶಿಕ್ಷಣದ ಬಲವರ್ಧನೆಗೆ ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಸಹಕಾರ ಸಚಿವ ಅಮಿತ್ ಶಾ ಇಂದು ಪ್ರತಿಪಾದಿಸಿದ್ದಾರೆ. ಪುಣೆಯಲ್ಲಿ ಸಹಕಾರಿ ಕ್ಷೇತ್ರದ ಪಶ್ಚಿಮ ವಲಯ ಮಂಡಳಿಯ ೨೭ನೇ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಅಗತ್ಯ ಮಸೂದೆ ತರಲಾಗುವುದು ಎಂದು ಪ್ರಕಟಿಸಿದರು. ಇದಕ್ಕೂ ಮುನ್ನ ಅವರು, ಪುಣೆಯಲ್ಲಿಂದು ಜನತಾ ಸಹಕಾರಿ ಬ್ಯಾಂಕ್ ನ ವಜ್ರ ಮಹೋತ್ಸವ ಸಮಾರಂಭ ಉದ್ದೇಶಿಸಿ ಮಾತನಾಡಿದರು. ಕೇಂದ್ರ ಸರ್ಕಾರದ ಪ್ರಯತ್ನಗಳಿಂದಾಗಿ ಕಳೆದ ಮೂರು ವರ್ಷಗಳಲ್ಲಿ ಸಹಕಾರಿ ವಲಯ ಮಹತ್ವದ ಪಡೆದಿದ್ದು, ದೈತ್ಯ ಮಾರುಕಟ್ಟೆ ಶಕ್ತಿಯಾಗಿ ರೂಪುಗೊಂಡಿದೆ. ಪುಣೆಯಲ್ಲಿ ಸಹಕಾರಿ ಸಂಘಗಳ ಕೇಂದ್ರ ರಿಜಿಸ್ಟ್ರಿಯ ಮೊದಲ ಕಚೇರಿ ತೆರೆಯಲಾಗುವುದು ಎಂದು ಹೇಳಿದರು.

<><*<><>*><>

ಭವಿಷ್ಯದ ನಾಯಕರನ್ನು ರೂಪಿಸುವಲ್ಲಿ ನಿರಂತರ ಕಲಿಕೆ, ವೈಯಕ್ತಿಕ ನಡವಳಿಕೆ ಮತ್ತು ತತ್ವಶಾಸ್ತ್ರ ಜ್ಞಾನ ಅಗತ್ಯ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಖಾತೆ ಸಚಿವ ಭೂಪೇಂದರ್ ಯಾದವ್ ಹೇಳಿದ್ದಾರೆ. ಸ್ಕೂಲ್ ಆಫ್ ಅಲ್ಟಿಮೇಟ್ ಲೀಡರ್‌ಶಿಪ್-ಎಸ್‌ಒಯುಎಲ್ ಆಯೋಜಿಸಿದ್ದ ನಾಯಕತ್ವ ಸಮಾವೇಶ ಉದ್ದೇಶಿಸಿ ಮಾತನಾಡಿದ

ಅವರು, ನಾಯಕತ್ವ ಎಂದರೆ ಕೇವಲ ಉನ್ನತ ಸ್ಥಾನ ಪಡೆಯುವುದಲ್ಲ. ಅದು ನಿರಂತರ ಕಲಿಕೆ ಮೂಲಕ ಔನ್ನತ್ಯ ಸಾಧಿಸುವುದಾಗಿದೆ ಎಂದರು. ಇಂದಿನ ವೇಗದ ಯುಗದಲ್ಲಿ ಬಾಹ್ಯ ಘಟನೆಗಳು ಮತ್ತು ಆಲೋಚನೆಗಳಿಂದಾಗಿ ಮನಸ್ಸು ಬೇಗ ವಿಚಲಿತಗೊಳ್ಳಲಿದ್ದು, ನಾಯಕರು ಸ್ವಯಂ ನಿಯಂತ್ರಣ ಅಭ್ಯಾಸ ಮಾಡಿ, ತಳಮಳಗೊಳ್ಳದೇ ಶಾಂತಚಿತ್ತದಿಂದ ಇರಬೇಕು ಎಂದು ಸಚಿವರು ಕಿವಿಮಾತು ಹೇಳಿದರು.

<><*<><>*><>

ಭಾರತವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ಯಬಹುದಾದಂತೆ ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ರೂಪಿಸಲಾಗಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ದೆಹಲಿ ವಿಶ್ವವಿದ್ಯಾಲಯದ ೧೦೧ನೇ ಘಟಿಕೋತ್ಸವ ಉದ್ದೇಶಿಸಿ ಮಾತನಾಡಿದ ಅವರು, ದೇಶಾದ್ಯಂತ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅನುಷ್ಠಾನಗೊಳಿಸಿದ್ದಲ್ಲಿ ಮಾತ್ರ ಭಾರತವನ್ನು ೨೦೪೭ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿಸಲು ಸಾಧ್ಯ ಎಂದು ಹೇಳಿದರು. ಯುವಕರು ದೇಶದ ಜನಸಂಖ್ಯೆಯ ಶೇಕಡ ೭೦ ರಷ್ಟಿದ್ದು, ವಿದ್ಯಾರ್ಥಿಗಳು ಪ್ರಧಾನಮಂತ್ರಿಗಳ ಮುನ್ನೋಟದ ವಿಕಸಿತ ಭಾರತ ಗುರಿಯನ್ನು ಸಾಕಾರಗೊಳಿಸಲು ಮುನ್ನಡೆವಂತೆ ಸಚಿವರು ಕರೆ ನೀಡಿದರು.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮ ನಾಳೆ ಬೆಳಗ್ಗೆ ೧೧ ಗಂಟೆಗೆ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳಲ್ಲಿ ಪ್ರಸಾರವಾಗಲಿದೆ. ನಾಳಿನ ೧೧೯ನೇ ಆವೃತ್ತಿಯಲ್ಲಿ ಪ್ರಧಾನಿ ತಮ್ಮ ಅನಿಸಿಕೆ ಅಭಿಪ್ರಾಯಗಳನ್ನು ಹಂಚಿಕೊಳ್ಳಲಿದ್ದಾರೆ. ಆಕಾಶವಾಣಿಯ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಆಪ್, ವಾರ್ತಾ ಮತ್ತು ಪ್ರಸಾರ ಸಚಿವಾಲಯ, ಪ್ರಧಾನಮಂತ್ರಿಗಳ ಕಾರ್ಯಾಲಯ ಹಾಗೂ ಡಿಡಿ ನ್ಯೂಸ್ ಯುಟ್ಯೂಬ್ ವಾಹಿನಿಗಳಲ್ಲೂ ಈ ಕಾರ್ಯಕ್ರಮವನ್ನು ಆಲಿಸಬಹುದು. ಹಿಂದಿ ಅವತರಣಿಕೆ ಬಳಿಕ ಪ್ರಾದೇಶಿಕ ಭಾಷಾ ಆವೃತ್ತಿ ಬಿತ್ತರವಾಗಲಿದೆ.

<><*<><>*><>

ದೇಶದ ಅಭಿವೃದ್ಧಿಗೆ ಕೃಷಿ ವಲಯದ ಪಾತ್ರ ಮುಖ್ಯವಾಗಿದೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿಂದು ಆರಂಭವಾದ ಕೃಷಿ ವಿಜ್ಞಾನ ಮೇಳ-೨೦೨೫ಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರಧಾನಿ ನರೇಂದ್ರ ಮೋದಿ, ನೇತೃತ್ವದಲ್ಲಿ ದೇಶವನ್ನು ವಿಕಸಿತ ಭಾರತವಾಗಿಸುವ ಅಭಿಯಾನ ಮುಂದುವರಿದಿದೆ. ಹಾಗೆಯೇ ಕೃಷಿ ವಲಯ ಹಾಗೂ ರೈತರ ಸಹಕಾರವಿಲ್ಲದೇ ವಿಕಸಿತ ಭಾರತದ ಗುರಿ ಸಾಕಾರಗೊಳ್ಳಲು ಸಾಧ್ಯವಿಲ್ಲ. ಇಂದೂ ಕೂಡ ಕೃಷಿ, ದೇಶದ ಆರ್ಥಿಕತೆಯ ಬೆನ್ನೆಲುಬಾಗಿದೆ ಎಂದರು. ಗುಣಮಟ್ಟದ ಬೀಜಗಳು ಸುಲಭವಾಗಿ ರೈತರಿಗೆ ಸಿಗುವಂತಾಗಬೇಕು ಎಂದು ಒತ್ತಿ ಹೇಳಿದ ಅವರು, ತಮ್ಮ ಕೃಷಿ ಪದ್ಧತಿಗಳನ್ನು ನಿರ್ವಹಿಸಲು ರೈತರನ್ನು ಸಬಲಗೊಳಿಸುವುದು ಅತಿ ಮುಖ್ಯ ಎಂದು ಅವರು ಹೇಳಿದರು. ಉನ್ನತ ಕೃಷಿ - ವಿಕಸಿತ ಭಾರತ ಎಂಬುದು ಈ ಮೇಳದ ಧ್ಯೇಯವಾಕ್ಯವಾಗಿದೆ. ಭಾರತೀಯ ಕೃಷಿ ಸಂಶೋಧನಾ ಸಂಸ್ಥೆ ಅಭಿವೃದ್ಧಿಪಡಿಸಿರುವ ವಿವಿಧ ತಂತ್ರಜ್ಞಾನ ಹಾಗೂ ಕೃಷಿ ಸಂಬಂಧಿ ವ್ಯವಸ್ಥೆಗಳ ನೇರ ಪ್ರಾತ್ಯಕ್ಷಿಕೆಗಳು ಈ ಮೇಳದ ಪ್ರಮುಖ ಆಕರ್ಷಣೆಯಾಗಿದೆ.

<><*<><>*><>

ಸಾರ್ವಜನಿಕ ಆಡಳಿತದಲ್ಲಿ ಶ್ರೇಷ್ಠತೆಗಾಗಿ ನೀಡುವ ಪ್ರಧಾನಮಂತ್ರಿಗಳ ಪ್ರಶಸ್ತಿ-೨೦೨೪ ಕ್ಕೆ ಒಂದೂವರೆ ಸಾವಿರ ನಾಮನಿರ್ದೇಶನಗಳನ್ನು ಸ್ವೀಕರಿಸಲಾಗಿದೆ. ಈ ಪ್ರಶಸ್ತಿಗಳು ಸಾರ್ವಜನಿಕ ಸೇವಕರ ಕೊಡುಗೆಗಳನ್ನು ಮೂರು ವಿಭಾಗಗಳಲ್ಲಿ ಗುರುತಿಸಲಿದೆ. ಇದಲ್ಲದೇ ನಾವಿನ್ಯತಾ ವಿಭಾಗದಲ್ಲಿ ಆರು ಪ್ರಶಸ್ತಿಗಳನ್ನು ನೀಡಲಾಗುವುದು. ಈ ಪ್ರಶಸ್ತಿಗಾಗಿ ೭೦೦ ಜಿಲ್ಲೆಗಳು ನೋಂದಾಯಿಸಿಕೊಂಡಿವೆ. ನವದೆಹಲಿಯಲ್ಲಿ ನಾಗರಿಕ ಸೇವೆಗಳ ದಿನವಾದ ಏಪ್ರಿಲ್ ೨೧ ರಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

<><*<><>*><>

ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೇರ್ ಲೆಹೆನ್ ಈ ತಿಂಗಳ ೨೭ ರಿಂದ ಭಾರತಕ್ಕೆ ಎರಡು ದಿನಗಳ ಭೇಟಿ ನೀಡಲಿದ್ದಾರೆ. ಇದು ಅವರ ಮೂರನೇ ಭಾರತ ಭೇಟಿಯಾಗಿದ್ದು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ನಿಯೋಗ ಮಟ್ಟದ ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ೨೦೦೪ ರಿಂದ ಭಾರತ ಮತ್ತು ಯೂರೋಪ್ ತಂತ್ರಗಾರಿಕಾ ಪಾಲುದಾರರಾಗಿದ್ದು, ವಿವಿಧ ವಲಯಗಳಲ್ಲಿ ದ್ವಿಪಕ್ಷೀಯ ಬಾಂಧವ್ಯ ವರ್ಧಿಸಿದೆ. ಉರ್ಸುಲಾ ಅವರ ಈ ಭೇಟಿಯು ಈ ಬಾಂಧವ್ಯವನ್ನು ಇನ್ನಷ್ಟು ಗಟ್ಟಿಗೊಳಿಸುವ ನಿರೀಕ್ಷೆಯಿದೆ.

<><*<><>*><>

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಈಗ ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಐದು ಪಂದ್ಯಗಳ ಟಿ-೨೦ ಪುರುಷರ ಅಂಧರ ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಭಾರತ ೭ ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದೆ. ಬೆಂಗಳೂರಿನಲ್ಲಿಂದು ನಡೆದ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಬಾಂಗ್ಲಾದೇಶ ತಂಡ ನಿಗದಿತ ೨೦ ಓವರ್‌ಗಳಲ್ಲಿ ಎಲ್ಲಾ ವಿಕೆಟ್ ಕಳೆದುಕೊಂಡು ೧೩೧ ರನ್ ಗಳಿಸಿತು. ಗುರಿ ಬೆನ್ನತ್ತಿದ ಭಾರತ ತಂಡ, ೧೩.೩ ಓವರ್‌ಗಳಲ್ಲಿ ಕೇವಲ ೩ ವಿಕೆಟ್ ನಷ್ಟಕ್ಕೆ ೧೩೨ ರನ್ ಗಳಿಸಿ ಗೆಲುವಿನ ನಗೆ ಬೀರಿತು.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್ ಕರ್ ಅವರು ರಾಜಸ್ಥಾನದ ಜೈಪುರಕ್ಕೆ ನಾಳೆ ಒಂದು ದಿನದ ಭೇಟಿ ನೀಡಲಿದ್ದಾರೆ. ಭೇಟಿ ವೇಳೆ ಅವರು ಜೈಪುರ ರಾಷ್ಟ್ರೀಯ ವಿಶ್ವವಿದ್ಯಾಲಯದ ೧೪ನೇ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>**